ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 592 (724)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ವಿಷಯ : ಜವಳಿ ನಿಗಮಗಳ ಕಾರ್ಯನಿರ್ವಹಣೆ ಬಗ್ಗೆ

(ಅ) ಜವಳಿ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳ ಸಂಖ್ಯೆ ಎಷ್ಟು ; ಸದರಿ ನಿಗಮಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಯಾವ ರೀತಿಯ ಅನುದಾನ ನೀಡಲಾಗುತ್ತಿದೆ ; (ಅಂಕಿ ಅಂಶ ಒದಗಿಸುವುದು)

(ಆ) ಕೈಮಗ್ಗ ಹಾಗೂ ವಿದ್ಯುತ್ ಮಗ್ಗದಿಂದ ನೇಯ್ದ ಬಟ್ಟೆಗಳನ್ನು ಯಾವ ರೀತಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆ ;

(ಇ) ಉತ್ಪಾದನೆ ಹಾಗೂ ಬೇಡಿಕೆಗಳ ಅಂತರ ಯಾವ ರೀತಿಯಲ್ಲಿದೆ; ಇದರ ಪರಿಣಾಮವಾಗಿ ರಾಜ್ಯದ ನೇಕಾರರ ಸಮಸ್ಯೆಗೆ ಸರ್ಕಾರ ಯಾವ ರೀತಿಯಲ್ಲಿ ಪರಿಹಾರ ಒದಗಿಸುತ್ತಿದೆ ?